ಕರ್ನಾಟಕ ಸರ್ಕಾರ

# ಜಿಲ್ಲಾ ಪಂಚಾಯತ ಕಾರ್ಯಾಲಯ, ಹಾವೇರಿ 581110

ದೂರವಾಣಿ : 08375-249033,
ಫ್ಯಾಕ್ಸ : 08375-249037
E-Mail : ceo_zp_hvr@nic.in

ಕ್ರಸಂ:ಹಾಜಿಪಂ/ಅಭಿ-1/MGNREGA/ಹೊ.ಗು/ವಹಿ- /2021-22 ದಿನಾಂಕ: 28-06-2021 07

## :: ಪತ್ರಿಕಾ ಪ್ರಕಟಣೆ ::

ವಿಷಯ : ಹಾವೇರಿ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ .ಾತರಿ ಯೋಜನೆಯಡಿ ಹೊರಗುತ್ತಿಗೆ ಆಧಾರದ ಮೇಲೆ ತಾಂತ್ರಿಕ ಸಹಾಯಕರು (ಅರಣ್ಯ/ಕೃಷಿ/ತೋಟಗಾರಿಕೆ) ಮತ್ತು ಬಿ.ಎಫ್.ಟಿ., ಹುದ್ದೆಗಳಿಗೆ ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ :1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿಪಿ/ಇಜಿಎಸ್/50/2021(ಇ-442252) ದಿನಾಂಕ: 04-03-2021.
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಗ್ರಾಅಪ/515/ಉಖಾಯೋ/2015,ದಿ: 03-03-2021.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ/712/ಉಖಾಯೋ/2016, ದಿ: 23-03-2021.

* * * *

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಮತ್ತು ಕಾಮಗಾರಿಗಳ ಗುಣಮಟ್ಟವನ್ನು ಕಾಯ್ದುಕೊಳ್ಳುವ ಸಲುವಾಗಿ ಹಾವೇರಿ ಜಿಲ್ಲೆಯ ತಾಲೂಕುಗಳಲ್ಲಿ 03 ತಾಂತ್ರಿಕ ಸಹಾಯಕರು (ಅರಣ್ಯ), 03 ತಾಂತ್ರಿಕ ಸಹಾಯಕರು (ಕೃಷಿ) 08 ತಾಂತ್ರಿಕ ಸಹಾಯಕರು (ತೋಟಗಾರಿಕೆ) ಮತ್ತು 08 ಬಿ.ಎಫ್.ಟಿ. (ಬರಿಗಾಲು ತಜ್ಞ), ಹುದ್ದೆಗಳಿಗೆ ಉಲ್ಲೇಖಿತ ಪತ್ರದಲ್ಲಿ ಸೂಚಿಸಿದಂತೆ, ಕಾರ್ಯದಕ್ಷತೆ ಮತ್ತು ಸಾಮರ್ಥ್ಯದ ಮೇರೆಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆಯಲು ಈ ಕೆಳಕಂಡ ಪಟ್ಟಿಯಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

| ಕ್ರ ಸಂ | ಹುದ್ದೆಯ ಹೆಸರು | ಕನಿಷ್ಠ ವಿದ್ಯಾರ್ಹತೆ | ಅಪೇಕ್ಷಣೀಯ ವಿದ್ಯಾರ್ಹತೆ | ಹುದ್ದೆಗಳ ಸಂಖ್ಯೆ | ಮಾಸಿಕ ಸಂಭಾವನೆ (ರೂ. ಗಳಲ್ಲಿ) | ವಯೋ ಮಿತಿ | ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕ ಮತ್ತು ಆನ್ ಲೈನ್ ವೆಬ್ ಸೈಟ್ ವಿಳಾಸ | ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ ದಿನಾಂಕ ಮತ್ತು ಸಮಯ |
|---|---|---|---|---|---|---|---|---|
| 1 | 2 | 3 | | 4 | 5 | | 8 | 9 |
| 1 | ತಾಂತ್ರಿಕ ಸಹಾಯಕರು (ಅರಣ್ಯ) | B.Sc. (Forestry) | M.Sc. (Forestry) ಮತ್ತು ಸಂಬಂಧಿಸಿದ ಕಾರ್ಯಕ್ಷೇತ್ರದಲ್ಲಿ ಅನುಭವ | 03 | 24000/-(ಪ್ರಯಾಣ ಭತ್ಯೆ ಪ್ರತಿ ಕಿ.ಮೀ.ಗೆ ರೂ. 5/- ನಂತೆ ಗರೀಷ್ಟ ಮಾಸಿಕ 1500/- ಗಳು | 21-40 ವರ್ಷ | ದಿ:29-07-2021 ರಿಂದ 12-08-2021<br>https://haveri.nic.inp/ | ದಿ: 24-08-2021 ಸಮಯ : ಬೆಳಿಗ್ಗೆ 10-30 ರಿಂದಾ ಸಂಜೆ 5-00 ರವರೆಗೆ<br>ಸ್ಥಳ : ಜಿಲ್ಲಾ ಪಂಚಾಯತ ಹಾವೇರಿ ಸಭಾಂಗಣ |
| 2 | ತಾಂತ್ರಿಕ ಸಹಾಯಕರು (ಕೃಷಿ) | B.Sc. (Agri) | M.Sc. (Agri) ಮತ್ತು ಸಂಬಂಧಿಸಿದ ಕಾರ್ಯಕ್ಷೇತ್ರದಲ್ಲಿ ಅನುಭವ | 03 | 24000/-(ಪ್ರಯಾಣ ಭತ್ಯೆ ಪ್ರತಿ ಕಿ.ಮೀ.ಗೆ ರೂ. 5/- ನಂತೆ ಗರೀಷ್ಟ ಮಾಸಿಕ 1500/- ಗಳು | 21-40 ವರ್ಷ | | |
| 3 | ತಾಂತ್ರಿಕ ಸಹಾಯಕರು (ತೋಟಗಾರಿಕೆ) | B.Sc. (Horti) | M.Sc. (Horti) ಮತ್ತು ಸಂಬಂಧಿಸಿದ ಕಾರ್ಯಕ್ಷೇತ್ರದಲ್ಲಿ ಅನುಭವ | 08 | 24000/-(ಪ್ರಯಾಣ ಭತ್ಯೆ ಪ್ರತಿ ಕಿ.ಮೀ.ಗೆ ರೂ. 5/- ನಂತೆ ಗರೀಷ್ಟ ಮಾಸಿಕ 1500/- ಗಳು | 21-40 ವರ್ಷ | | |
| 4 | ಬಿ.ಎಫ್.ಟಿ., (ಬರಿಗಾಲು ತಜ್ಞ), | SSLC | - | 08 | 12000/- | 18-45 ವರ್ಷ | | |

**ವಿಶೇಷ ಸೂಚನೆ :**

1) Online ಮೂಲಕ ಮಾತ್ರ https://haveri.nic.in/Website ನಲ್ಲಿ ಅರ್ಜಿಯನ್ನು ಸಲ್ಲಿಸುವುದು.
2) Online ಮೂಲಕ ಅರ್ಜಿ ಸಲ್ಲಿಸಲು **ಪ್ರಾರಂಭ ದಿನಾಂಕ: 29-07-2021 ಮುಕ್ತಾಯ ದಿನಾಂಕ:12-08-2021.**
3) ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ನಮೂದಿಸಿರುವ ದಾಖಲೆಗಳ ಮೂಲ ಪ್ರತಿಗಳನ್ನು ದಾಖಲಾತಿ ಪರಿಶೀಲನೆ ಸಂದರ್ಭದಲ್ಲಿ ಕಡ್ಡಾಯವಾಗಿ ಹಾಜರುಪಡಿಸುವುದು.
4) ಮೂಲ ದಾಖಲೆಗಳನ್ನು ಪರಿಶೀಲಿಸಲು ನಿಗದಿಪಡಿಸಿರುವ **ದಿನಾಂಕ 24-08-2021 ರಂದು ಸಂಜೆ 5.00** ರೊಳಗಾಗಿ ಹಾಜರಾಗುವ ಅಭ್ಯರ್ಥಿಗಳ ದಾಖಲೆಗಳನ್ನು ಮಾತ್ರ ಪರಿಶೀಲಿಸಲಾಗುವುದು.
5) ಸಂಬಂಧಪಟ್ಟ ವಿಷಯದಲ್ಲಿ ಅಪೇಕ್ಷಣಿಯ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು.

...2...

6) ದಾಖಲಾತಿ ಪರಿಶೀಲನೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳನ್ನು ವಿದ್ಯಾರ್ಹತೆಯಲ್ಲಿ ಹೊಂದಿದ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ, ಸದರಿ ಪಟ್ಟಿಯಲ್ಲಿ ಗರಿಷ್ಠ ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಹುದ್ದೆಗೆ ಆಯ್ಕೆ ಮಾಡಲಾಗುವುದು. (ಸರ್ಕಾರದಿಂದ ನಿಗದಿಪಡಿಸಿರುವ ಎಲ್ಲಾ ಮಾರ್ಗಸೂಚಿಗಳನ್ವಯ ಮತ್ತು ಉಲ್ಲೇಖಿತ ಸರ್ಕಾರದ ಆದೇಶಗಳಂತೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು)
7) ಹುದ್ದೆಗೆ ಆಯ್ಕೆ ಮಾಡಲಾದ ಅಭ್ಯರ್ಥಿಗಳು ನಿಯೋಜಿಸಿದ ಸ್ಥಳಕ್ಕೆ ಒಂದು ವಾರದೊಳಗಾಗಿ ಹಾಜರಾಗದಿದ್ದಲ್ಲಿ ಅರ್ಹತಾ ಪಟ್ಟಿಯಲ್ಲಿನ ನಂತರದ ಅಭ್ಯರ್ಥಿಯನ್ನು ಆಯ್ಕೆಗೆ ಪರಿಗಣಿಸಲಾಗುವುದು.
8) ಜಿಲ್ಲೆಯಲ್ಲಿ ಯಾವುದೇ ತಾಲೂಕಿನಲ್ಲಿ ನಿಯೋಜಿಸಿದರೂ ಕೆಲಸ ಮಾಡಲು ಸಿದ್ದರಿರಬೇಕು.
9) Online ಅರ್ಜಿಯಲ್ಲಿರುವ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡತಕ್ಕದ್ದು.
10) ಅರ್ಜಿಯೊಂದಿಗೆ ಲಗತ್ತಿಸಬೇಕಾದ (Upload) ದಾಖಲೆಗಳು.
   (ಅ) ಸಹಿಯೊಂದಿಗೆ ದೃಢೀಕರಿಸಿದ ಇತ್ತೀಚಿನ ಭಾವಚಿತ್ರ (In jpg Format)
   (ಆ) ಎಸ್. ಎಸ್. ಎಲ್. ಸಿ., ಅಂಕಪಟ್ಟಿ (In pdf File)
   (ಇ) ಶೈಕ್ಷಣಿಕ ವಿದ್ಯಾರ್ಹತೆಯ ಎಲ್ಲ ಸೆಮಿಸ್ಟರ್/ವರ್ಷಗಳ ಅಂಕಪಟ್ಟಿಗಳ ಪ್ರತಿ (In pdf File)
   (ಈ) ಕಾರ್ಯಕ್ಷೇತ್ರದಲ್ಲಿ ಅನುಭವ ಪ್ರಮಾಣ ಪತ್ರ. (In pdf File)
11) ಅರ್ಹ ಅಭ್ಯರ್ಥಿಗಳನ್ನು ನಿಗದಿ ಪಡಿಸಿದ ವಿದ್ಯಾರ್ಹತೆಗನುಗುಣವಾಗಿ ಮತ್ತು ಸರ್ಕಾರದಿಂದ ಹೊರಡಿಸಲಾದ ಮಾರ್ಗಸೂಚಿ ಮತ್ತು ಆದೇಶಗಳಂತೆ ಮೆರಿಟ್ ಪಟ್ಟಿಯನ್ನು ತಯಾರಿಸಲಾಗುವುದು.
12) ದಾಖಲಾತಿ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಸರ್ಕಾರದಿಂದ ಯಾವುದೇ ವಿಧವಾದ ಭತ್ಯೆ ನೀಡಲಾಗುವುದಿಲ್ಲ.
13) ಹೊರಗುತ್ತಿಗೆ ಆಧಾರದ ಸಿಬ್ಬಂದಿಗಳ ಸೇವೆ ಪಡೆಯಲು ಯಾವುದೇ ನೇರ ಸಂದರ್ಶನ ಅಥವಾ ಲಿಖಿತ ಪರೀಕ್ಷೆ ಇರುವುದಿಲ್ಲ.
14) ಮೆರಿಟ್ ಮೇಲೆ ಆಯ್ಕೆಯಾದ ಅಭ್ಯರ್ಥಿಗಳ ಸೇವೆಯನ್ನು ಜಿಲ್ಲೆಯಲ್ಲಿ ಅನುಮೋದಿತ ಮಾನವ ಸಂಪನ್ಮೂಲ ಸಂಸ್ಥೆಗಳ ಮುಖಾಂತರ ಸೇವೆ ಪಡೆದುಕೊಳ್ಳಲಾಗುವುದು.
15) ಹೊರಗುತ್ತಿಗೆ ಸೇವಾ ಅವಧಿಯು 11 ತಿಂಗಳಾಗಿದ್ದು ಇವರ ಕಾರ್ಯಕ್ಷಮತೆ ಪರಿಶೀಲಿಸಿ ಹೊರಗುತ್ತಿಗೆ ಸೇವೆ ಮುಂದುವರೆಸುವ ಅಧಿಕಾರ ಈ ಕೆಳಗೆ ಸಹಿ ಮಾಡಿದವರಿಗೆ ಇರುತ್ತದೆ.
16) ನೇಮಕಗೊಂಡ ಹೊರಗುತ್ತಿಗೆ ಸಿಬ್ಬಂದಿಯು ವಾರ್ಷಿಕ 12 ದಿನಗಳ ಸಾಂದರ್ಭಿಕ ರಜೆ ಪಡೆಯಬಹುದು.
17) ಮಹಿಳೆಯರು Maternity Benefit Act 1961 ರಡಿಯಲ್ಲಿ ಹೆರಿಗೆ ರಜೆ ಪಡೆಯಲು ಅರ್ಹರಾಗಿರುತ್ತಾರೆ.
18) ಆಯ್ಕೆಯಾದ ಅಭ್ಯರ್ಥಿಗಳು ತಾವು ನಿರ್ವಹಿಸುವ ಸ್ಥಳದಲ್ಲಿ ಅವ್ಯವಹಾರ ಅಥವಾ ಕ್ರಿಮಿನಲ್ ಚಟುವಟಿಕೆಗಳಲ್ಲಿ ಭಾಗಿಯಾಗಿರುವುದು ಸಾಬೀತಾದಲ್ಲಿ ತಕ್ಷಣವೇ ಕೆಲಸದಿಂದ ತೆಗೆದುಹಾಕಲಾಗುವುದು ಹಾಗೂ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
19) ಭರ್ತಿಯಾದ ಹುದ್ದೆಗಳಲ್ಲಿ ಅನಿವಾರ್ಯ ಕಾರಣ ನಿಮಿತ್ತ ಖಾಲಿಯಾದಲ್ಲಿ ಮೇಲ್ಕಾಣಿಸಿದ ರೀತಿಯಲ್ಲಿಯೇ ಮಾನವ ಸಂಪನ್ಮೂಲ ಸಂಸ್ಥೆಗಳ ಮೂಲಕ ಹೊರಗುತ್ತಿಗೆ ಆಧಾರದ ಸೇವೆ ಪಡೆಯಲಾಗುವುದು.
20) ಒಂದು ವೇಳೆ ಮೆರಿಟ್ ಆಧಾರದ ಮೇರೆಗೆ ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗದಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಆಯ್ಕೆಯನ್ನು ರದ್ದುಗೊಳಿಸಲಾಗುವುದು. ಮೆರಿಟ್ ಆಧಾರದ ಪ್ರತೀಕ್ಷಾ ಪಟ್ಟಿಯಲ್ಲಿರುವ (Waiting List) ಅಭ್ಯರ್ಥಿಗಳನ್ನು ಖಾಲಿಯಾಗುವ ಈ ಹುದ್ದೆಗಳಿಗೆ ಆಯ್ಕೆಗೆ ಪರಿಗಣಿಸಲಾವುದು.
21) ಬಿ.ಎಫ್.ಟಿ. ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಸಕ್ರೀಯ ಕೆಲಸಗಾರನಾಗಿರಬೇಕು. (ಸಕ್ರೀಯ ಕೆಲಸಗಾರರು ಎಂದರೇ ಸದರಿ ವ್ಯಕ್ತಿಯು ಹಿಂದಿನ ಮೂರು ವರ್ಷಗಳಲ್ಲಿ ಕನಿಷ್ಟ 2 ವರ್ಷಗಳಲ್ಲಿ 25 ದಿನಗಳಿಗೆ ಕಡಿಮೆ ಇಲ್ಲದಷ್ಟು ಯೋಜನೆಯಡಿ ಕೂಲಿ ಕಾರ್ಮಿಕನಾಗಿ ಕೆಲಸವನ್ನು ಮಾಡಿರಬೇಕು.
22) ಮೇಲೆ ಸೂಚಿಸಿದ ಹುದ್ದೆಗಳಲ್ಲಿ ಬಿ.ಎಫ್.ಟಿ., ಹುದ್ದೆಗೆ ಮಾತ್ರ ಸ್ಕ್ರೀನಿಂಗ್ ಟೆಸ್ಟ ಆಯೋಜಿಸಲಾಗುವುದು.
23) ಬಿ.ಎಫ್.ಟಿ., ಅಭ್ಯರ್ಥಿಯು ಕೇವಲ ಎಸ್.ಎಸ್.ಎಲ್.ಸಿ., ಅಂಕಪಟ್ಟಿಯನ್ನು ಮತ್ತು ಉದ್ಯೋಗ (ಜಾಬ್‌ಕಾರ್ಡ) ಚೀಟಿಯ ಮುಖಪುಟವನ್ನು ಅಪ್‌ಲೋಡ್ ಮಾಡುವುದು.
24) ಕಾಲಂ ನಂಬರ್ 9 ರಲ್ಲಿ ಸೂಚಿಸಿದಂತೆ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಲು ಅಭ್ಯರ್ಥಿಗಳ ಪಟ್ಟಿಯನ್ನು **https://haveri.nic.in/Website**ನಲ್ಲಿ ಹಾಕಲಾಗುವುದು. ಖಿದ್ದಾಗಿ ಮೂಲ ದಾಖಲೆಗಳೊಂದಿಗೆ ಅಂತಹ ಅರ್ಹ ಅಭ್ಯರ್ಥಿಗಳು ಮಾತ್ರ ದಾಖಲಾತಿ ಪರಿಶೀಲನೆಗೆ ಹಾಜರಾಗುವುದು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯತ, ಹಾವೇರಿ

ಪ್ರತಿ :

1. ಆಯುಕ್ತರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಪದನಿಮಿತ್ತ ಹಾಗೂ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಜಿಲ್ಲೆಯ ಎಲ್ಲ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಚೇರಿಯ ಸೂಚನಾ ಫಲಕಕ್ಕೆ ಪ್ರಸಿದ್ಧಿಸಲು.
3. ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಕಚೇರಿಯ ಸೂಚನಾ ಫಲಕಕ್ಕೆ ಪ್ರಸಿದ್ಧಿಸಲು.
   2/- ಬಿ.ಎಫ್.ಟಿ ಅಭ್ಯರ್ಥಿಗಳಿಗೆ ತಮ್ಮ ಕಛೇರಿಯಲ್ಲಿಯ ಅರ್ಜಿ ನಮೂನೆಯನ್ನು ಆನ್‌ಲೈನ್ ನಲ್ಲಿ ಉಚಿತವಾಗಿ ಭರ್ತಿ ಮಾಡಲು ಸಂಬಂಧಿಸಿದ ಗಣಕಯಂತ್ರ ನಿರ್ವಾಹಕರುಗಳಿಗೆ ಸೂಚಿಸುವುದು.
4. ರಕ್ಷಾ ಕಡತಕ್ಕೆ.